Akashvani : Bangalore
Regional Bulletin In Kannada
19.10.2024 / 18.40 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- **ಕರ್ನಾಟಕದಲ್ಲಿ ನಿರುದ್ಯೋಗ ಸಮಸ್ಯೆ ನಿವಾರಣೆಯೇ ಪ್ರಮುಖ ಗುರಿ ; ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ**
- **ಮೂಡಾ ಪ್ರಕರಣ - ೨ನೇ ದಿನವೂ ಇಡಿ ಅಧಿಕಾರಿಗಳಿಂದ ಆಯುಕ್ತರು ಸೇರಿದಂತೆ ಹಲವರ ವಿಚಾರಣೆ**
- **ಇಡಿ ತನಿಖೆ ಹಿನ್ನೆಲೆ ; ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆಗೆ ಬಿಜೆಪಿ ನಾಯಕರ ಆಗ್ರಹ**
- **ಹಸಿರು ಪಟಾಕಿಗಳನ್ನು ಮಾತ್ರ ಬಳಸುವಂತೆ ಪರಿಸರ ಸಚಿವ ಈಶ್ವರ್ ಖಂಡ್ರೆ ಮನವಿ**
- **ರಾಜ್ಯದ ಹಲವೆಡೆ ಭಾರೀ ಮಳೆ ; ಬೆಂಗಳೂರಿನಲ್ಲಿ ಇಂದು-ನಾಳೆ ಧಾರಾಕಾರ ಮಳೆ ಸಾಧ್ಯತೆ**

**<><*<><>*><>**

ಕಳೆದ ಎರಡು ದಿನಗಳಿಂದ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ನೇತೃತ್ವದಲ್ಲಿ ಕೇಂದ್ರ ಕೈಗಾರಿಕಾ ಇಲಾಖೆ ಹಾಗೂ ಮಂಡ್ಯ ಜಿಲ್ಲಾಡಳಿತದ ಸಹಕಾರದೊಂದಿಗೆ ನಡೆದ ಉದ್ಯೋಗ ಮೇಳ ಮುಕ್ತಾಯಗೊಂಡಿದೆ. ಸುಮಾರು ಐದು ಸಾವಿರಕ್ಕೂ ಹೆಚ್ಚು ಉದ್ಯೋಗಾಕಾಂಕ್ಷಿಗಳು ಮಂಡ್ಯ ಜಿಲ್ಲೆ ಸೇರಿದಂತೆ ರಾಜ್ಯದ ಹಲವೆಡೆಯಿಂದ ಭಾಗವಹಿಸಿದ್ದರು. ಈ ಪೈಕಿ ಒಂದು ಸಾವಿರಕ್ಕೂ ಅಧಿಕ ಮಂದಿಗೆ ವಿವಿಧ ಕಂಪನಿಗಳು ಉದ್ಯೋಗಕ್ಕಾಗಿ ಸಂದರ್ಶನಕ್ಕೆ ಹಾಜರಾಗುವಂತೆ ಪತ್ರ ಕೊಟ್ಟರೆ, ಇನ್ನು ಕೆಲವು ಕಂಪನಿಗಳು ಉದ್ಯೋಗ ನೀಡಿರುವ ಆದೇಶ ಪ್ರತಿಗಳನ್ನು ನೀಡಿವೆ. ಉದ್ಯೋಗಾಕಾಂಕ್ಷಿಗಳಿಗೆ ಕೇಂದ್ರ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ ಪತ್ರಗಳನ್ನು ವಿತರಿಸಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕರ್ನಾಟಕದಲ್ಲಿ ಉದ್ಯೋಗ ಸಮಸ್ಯೆ ನಿವಾರಣೆ ಮಾಡುವುದು ನನ್ನ ಗುರಿಯಾಗಿದೆ ಎಂದು ಸ್ಪಷ್ಟಪಡಿಸಿದರು.

**ಧ್ವನಿ : ಹೆಚ್.ಡಿ.ಕುಮಾರಸ್ವಾಮಿ, ಕೇಂದ್ರ ಸಚಿವರು**

<><*<><>*><>

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಹಗರಣಕ್ಕೆ ಸಂಬಂಧಪಟ್ಟಂತೆ ಕೇಂದ್ರ ಜಾರಿ ನಿರ್ದೇಶನಾಲಯ ಎರಡನೇ ದಿನವಾದ ಇಂದು ಸಹ ಕಡತಗಳ ಪರಿಶೀಲನೆ ನಡೆಸುತ್ತಿದೆ. ಸಾಮಾಜಿಕ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ದೂರು ನೀಡಿರುವ ಹಿನ್ನೆಲೆಯಲ್ಲಿ ಇಡಿ ಅಧಿಕಾರಿಗಳು ಎರಡನೇ ದಿನವೂ ಮೈಸೂರಿನ ಕಚೇರಿಯಲ್ಲಿ ಕಡತಗಳ ಪರಿಶೀಲನೆ ನಡೆಸುತ್ತಿದ್ದಾರೆ. ಮಾಲೀಕತ್ವ, ಡಿ-ನೋಟಿಫಿಕೇಶನ್ ಮತ್ತು ಭೂಪರಿವರ್ತನೆಗೆ ಸಂಬಂಧಿಸಿದ ಮಹತ್ವದ ದಾಖಲೆಗಳು ನಾಪತ್ತೆಯಾಗಿರುವ ಹಿನ್ನೆಲೆಯಲ್ಲಿ ಇಡಿ ಈ ಹಗರಣದಲ್ಲಿ ಭಾಗಿಯಾಗಿರುವ ಅನೇಕರನ್ನು ವಿಚಾರಣೆಗೆ ಒಳಪಡಿಸುವ ಸಾಧ್ಯತೆ ಇದೆ ಎಂದು ಐಎಎನ್ಎಸ್ ಸುದ್ದಿ ಸಂಸ್ಥೆ ವರದಿಮಾಡಿದೆ. ಇಡಿ ಅಧಿಕಾರಿಗಳ ಸೂಚನೆಯಂತೆ ಮುಡಾ ಆಯುಕ್ತ ರಘುನಂದನ್ ಸೇರಿದಂತೆ ಹಿರಿಯ ಅಧಿಕಾರಿಗಳು ವಿಚಾರಣೆಗೆ ಹಾಜರಾಗಿದ್ದರು.

<><*<><>*><>

ಮುಡಾ ಪ್ರಕರಣದಲ್ಲಿ ಭಾಗಿಯಾದ ಆರೋಪದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಸ್ಥಾನಕ್ಕೆ ಕೂಡಲೇ ರಾಜೀನಾಮೆ ನೀಡಬೇಕೆಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಒತ್ತಾಯಿಸಿದ್ದಾರೆ. ಬೆಂಗಳೂರಿನಲ್ಲಿಂದು ಮಾತನಾಡಿದ ಅವರು, ಮೈಸೂರಿನ ಮುಡಾದಲ್ಲಿ ಹಲವು ಕಡತಗಳು ಕಣ್ಮರೆಯಾಗಿರುವುದು ತಿಳಿದುಬಂದಿದೆ. ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ಮುಡಾ ಕಡತಗಳನ್ನು ಮೈಸೂರಿನಿಂದ ಬೆಂಗಳೂರಿಗೆ ತಂದಿದ್ದಾರೆ. ಈ ಹಿನ್ನೆಲೆಯಲ್ಲಿ ಸಚಿವರನ್ನು ವಿಚಾರಣೆಗೆ ಒಳಪಡಿಸಬೇಕು ಎಂದು ಒತ್ತಾಯಿಸಿದ್ದಾರೆ. ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ನೀಡುವಂತೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಬೆಂಗಳೂರಿನಲ್ಲಿ ಆಗ್ರಹಿಸಿದ್ದಾರೆ. ಮೂಡ ಹಗರಣಕ್ಕೆ ಸಂಬಂಧ ಪಟ್ಟಂತೆ ಕೇಂದ್ರ ಜಾರಿ ನಿರ್ದೇಶನಾಲಯ ತನಿಖೆ ನಡೆಸುತ್ತಿರುವ ಹಿನ್ನೆಲೆಯಲ್ಲಿ ಕೂಡಲೇ ಮುಖ್ಯಮಂತ್ರಿ ಸಿದ್ದರಾಮಯ್ಯನವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕೆಂದು ಮೈಸೂರು ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಮೈಸೂರಿನಲ್ಲಿ ತಿಳಿಸಿದ್ದಾರೆ.

**ಧ್ವನಿ : ಕೃಷ್ಣದತ್ತ ಚಾಮರಾಜ ಒಡೆಯರ್**

<><*<><>*><>

ವಾಯು ಮಾಲಿನ್ಯ, ಶಬ್ದ ಮಾಲಿನ್ಯ ತಡೆಯಲು ಹಿರಿಯ ನಾಗರಿಕರು ಮತ್ತು ಮಕ್ಕಳ ಆರೋಗ್ಯದ ಹಿತ ದೃಷ್ಟಿಯಿಂದ ಪಟಾಕಿ ತ್ಯಜಿಸಲು ಇಲ್ಲವೆ ಹಸಿರು ಪಟಾಕಿಗಳನ್ನು ಮಾತ್ರ ಬಳಸುವಂತೆ

ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ್ ಖಂಡ್ರೆ ಮನವಿ ಮಾಡಿದ್ದಾರೆ. ಬೆಂಗಳೂರಿನಲ್ಲಿಂದು ಮಾತನಾಡಿದ ಅವರು, ಪರಿಸರಕ್ಕೆ ಹಾನಿ ಮಾಡುವ ಪಟಾಕಿಗಳಿಂದ ದೂರ ಇರುವ ಮೂಲಕ ಪರಿಸರ ಸಂರಕ್ಷಣೆಗೆ ಕೈಜೋಡಿಸಬೇಕು. ಜೊತೆಗೆ ರಾಸಾಯನಿಕ, ಭಾರ ಲೋಹಯುಕ್ತ ಪಟಾಕಿ ಬಳಸದಂತೆಯೂ ಸಲಹೆ ನೀಡಿದ್ದಾರೆ. ರಾತ್ರಿ ೮ ಗಂಟೆಯಿಂದ ೧೦ ಗಂಟೆಯ ತನಕ ಮಾತ್ರ ಹಸಿರು ಪಟಾಕಿ ಬಳಸಲು ಅವಕಾಶ ಮಾಡಿಕೊಡಲಾಗಿದೆ. ಸಾರ್ವಜನಿಕರು ನಿಯಮಗಳನ್ನು ಚಾಚು ತಪ್ಪದೇ ಪಾಲಿಸಬೇಕು ಎಂದು ಸೂಚಿಸಿದ್ದಾರೆ. ಸಂಘ-ಸಂಸ್ಥೆಗಳು, ಶಿಕ್ಷಕರು, ಬೋಧಕರು, ಉಪನ್ಯಾಸಕರು, ಪರಿಸರ ಪ್ರೇಮಿಗಳು, ಜನಪ್ರತಿನಿಧಿಗಳು ಜನರಲ್ಲಿ ಪಟಾಕಿಯ ದುಷ್ಪರಿಣಾಮಗಳ ಕುರಿತು ಅದರಲ್ಲೂ ಮಕ್ಕಳಲ್ಲಿ ಪಟಾಕಿ ತ್ಯಜಿಸುವಂತೆ ಜಾಗೃತಿ ಮೂಡಿಸಬೇಕು. ಪಟಾಕಿಗಳನ್ನು ತ್ಯಜಿಸಿ ದೀಪದಿಂದ ದೀಪ ಹಚ್ಚಿ ಪರಿಸರ ಸ್ನೇಹಿ ದೀಪಾವಳಿ ಆಚರಿಸೋಣ ಎಂದು ಅವರು ಮನವಿ ಮಾಡಿದ್ದಾರೆ.

<><*<><>*><>

ಪಶುಪಾಲನೆಯಿಂದ ಶೇಕಡ ೫೫ ರಷ್ಟು ಜಿಡಿಪಿ ವೃದ್ಧಿಯಾಗುತ್ತಿರುವುದು ಪ್ರಶಂಸನೀಯ ಎಂದು ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ. ಮಹದೇವಪ್ಪ ತಿಳಿಸಿದ್ದಾರೆ. ಕರ್ನಾಟಕ ಪಶುವೈದ್ಯಕೀಯ ಸಂಘದ ವತಿಯಿಂದ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಘಟಿಕೋತ್ಸವ ಭವನದಲ್ಲಿ ಆಯೋಜಿಸಿದ್ದ ಪಶುವೈದ್ಯರ ರಾಜ್ಯ ಮಟ್ಟದ ತಾಂತ್ರಿಕ ವಿಚಾರ ಸಂಕಿರಣ ಉದ್ಘಾಟಿಸಿ ಅವರು ಮಾತನಾಡಿದರು. ಪಶುಗಳ ಸಂತಾನಾಭಿವೃದ್ಧಿಯ ಜೊತೆಗೆ ಉತ್ಪಾದನಾ ಸಾಮರ್ಥ್ಯ ಹೆಚ್ಚಿಸಬೇಕು ಎಂದು ಪ್ರತಿಪಾದಿಸಿದ್ದಾರೆ. ಪಶುಸಂಗೋಪನೆ ಸಚಿವ ಕೆ.ವೆಂಕಟೇಶ್ ಮಾತನಾಡಿ, ಮುಖ್ಯಮಂತ್ರಿಗಳ ಸೂಚನೆಯಂತೆ ಖಾಸಗಿ ಪಶುವೈದ್ಯ ಕಾಲೇಜು ಪ್ರಾರಂಭಿಸಲು ಅನುಮತಿ ನೀಡದೆ, ಸರ್ಕಾರದಿಂದ ನೂತನವಾಗಿ ಎರಡು ಕಾಲೇಜು ಸ್ಥಾಪಿಸಲು ನಿರ್ಧರಿಸಲಾಗಿದೆ ಎಂದು ತಿಳಿಸಿದರು. ಕಾಲುಬಾಯಿಜ್ವರದ ಲಸಿಕೆಯನ್ನು ತಿಂಗಳೊಳಗೆ ಎಲ್ಲಾ ರಾಸುಗಳಿಗೆ ನೀಡಬೇಕು ಎಂದು ಸಚಿವರು ಸೂಚಿಸಿದ್ದಾರೆ.

<><*<><>*><>

ಚನ್ನಪಟ್ಟಣ ಉಪಚುನಾವಣೆ ಅಭ್ಯರ್ಥಿ ಆಯ್ಕೆ ಸಂಬಂಧ ಕಾರ್ಯಕರ್ತರ ಅಭಿಪ್ರಾಯ ಸಂಗ್ರಹಿಸಲಾಗುತ್ತಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಪ್ರತಿಕ್ರಿಯಿಸಿದ ಅವರು, ಚನ್ನಪಟ್ಟಣ ಉಪಚುನಾವಣೆಯಲ್ಲಿ ಕಾಂಗ್ರೆಸ್‌ನಿಂದ ಯಾರೇ ನಿಂತರು ನಾನೇ ಅಭ್ಯರ್ಥಿ ಎಂದು ಹೇಳಿದ್ದಾರೆ. ಉಪಚುನಾವಣೆ ನಡೆಯುತ್ತಿರುವ ಎಲ್ಲಾ

ಕ್ಷೇತ್ರಗಳ ನಾಯಕರ ಜತೆ ಚರ್ಚೆ ಮಾಡಲಾಗುತ್ತಿದೆ. ಎಲ್ಲಾ ನಾಯಕರು ಸೇರಿ ಒಮ್ಮತದ ಅಭ್ಯರ್ಥಿ ಕಣಕ್ಕಿಳಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ಬಳ್ಳಾರಿ ಜಿಲ್ಲೆಯ ಸಂಡೂರು ವಿಧಾನಸಭೆ ಉಪಚುನಾವಣೆಯಲ್ಲಿ ಅಗತ್ಯ ಸೇವೆಯಲ್ಲಿ ಕರ್ತವ್ಯ ನಿರತರಾಗಿರುವ ಆ ಕ್ಷೇತ್ರದ ಅಧಿಕಾರಿ, ಸಿಬ್ಬಂದಿ ಮತದಾನದಿಂದ ವಂಚಿತರಾಗದಂತೆ ಅವರಿಗೆ ಪೋಸ್ಟಲ್ ಬ್ಯಾಲೆಟ್ ಮೂಲಕ ಮತದಾನ ಮಾಡಲು ಅವಕಾಶ ಕಲ್ಪಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಹೇಳಿದ್ದಾರೆ. ಪ್ರತಿಯೊಂದು ಮತವೂ ಅಮೂಲ್ಯವಾಗಿದ್ದು, ಮತದಾನದ ದಿನದಂದು ಕರ್ತವ್ಯದ ಕಾರಣದಿಂದಾಗಿ ಯಾರೊಬ್ಬ ಅರ್ಹ ಮತದಾರನೂ ಕೂಡ ಮತದಾನದಿಂದ ವಂಚಿತರಾಗಬಾರದು ಎಂದು ಹೇಳಿದರು.

<><*<><>*><>

ಮುಂದಿನ ಎರಡು ಮೂರು ದಿನಗಳಲ್ಲಿ ಕರ್ನಾಟಕ ಸೇರಿದಂತೆ ದೇಶದ ದಕ್ಷಿಣ ಭಾಗಗಳಲ್ಲಿ ಭಾರೀ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ರಾಜಧಾನಿ ಬೆಂಗಳೂರಿನಲ್ಲಿ ಮೋಡಕವಿದ ವಾತಾವರಣ ಮುಂದುವರಿದಿದೆ. ಹಲವೆಡೆ ಭಾರೀ ಮಳೆಯಾಗಿದ್ದು ವಾಹನ ಸವಾರರು ಪರದಾಡುವಂತಾಗಿದೆ. ರಾಜಧಾನಿ ಬೆಂಗಳೂರಿನಲ್ಲಿ ಇಂದು ಮತ್ತು ನಾಳೆ ಗುಡುಗು ಸಹಿತ ಧಾರಾಕಾರ ಮಳೆಯಾಗುವ ಸಾಧ್ಯತೆಯಿದೆ ಎಂದು ಇಲಾಖೆ ತಿಳಿಸಿದೆ. ಬೆಳಗಾವಿ, ಧಾರವಾಡ, ಹಾವೇರಿ, ಗದಗ, ತುಮಕೂರು, ಮೈಸೂರು, ಹಾಸನ, ಕೊಡಗು ಜಿಲ್ಲೆಗಳಲ್ಲಿ ಗುಡುಗು ಸಹಿತ ಭಾರಿ ಮಳೆಯಾಗುವ ಸಾಧ್ಯತೆಯಿದೆ. ಉತ್ತರ ಒಳನಾಡು ಹಾಗೂ ದಕ್ಷಿಣ ಒಳನಾಡು, ಕರಾವಳಿಯ ಕೆಲವು ಜಿಲ್ಲೆಗಳಲ್ಲಿ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ.

<><*<><>*><>

ಸಂಸದ ಕೋಟಾ ಶ್ರೀನಿವಾಸ ಪೂಜಾರಿ ರಾಜಿನಾಮೆಯಿಂದ ತೆರವಾಗಿರುವ ವಿಧಾನಪರಿಷತ್ ಉಪ-ಚುನಾವಣೆಗೆ ಇದೇ ೨೧ ರಂದು ಮತದಾನ ನಡೆಯಲಿದೆ. ಸಾರ್ವಜನಿಕರು ಶಾಂತಿ ಸುವ್ಯವಸ್ಥೆ ಕಾಪಾಡುವ ಮೂಲಕ ಮುಕ್ತ, ನ್ಯಾಯಯುತ ಹಾಗೂ ನಿಷ್ಪಕ್ಷಪಾತ ಚುನಾವಣೆಯನ್ನು ನಡೆಸುವ ನಿಟ್ಟಿನಲ್ಲಿ, ೧೫೮ ಮತದಾನ ಕೇಂದ್ರಗಳ ಸುತ್ತಮುತ್ತ ೧೦೦ ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ಡಾ. ಕೆ ವಿದ್ಯಾಕುಮಾರಿ ಆದೇಶ ಹೊರಡಿಸಿದ್ದಾರೆ. ಶವ ಸಂಸ್ಕಾರಕ್ಕೆ ಅಥವಾ ಮದುವೆ ಮತ್ತು ಧಾರ್ಮಿಕ ಮೆರವಣಿಗೆಗಳಿಗೆ ಈ ಆದೇಶ ಅನ್ವಯಿಸುವುದಿಲ್ಲ.

<><*<><>*><>

ವಿವಿಧ ಕಾರಣಗಳಿಂದ ತೆರವಾಗಿರುವ ಗ್ರಾಮ ಪಂಚಾಯಿತಿ ಸದಸ್ಯ ಸ್ಥಾನಗಳಿಗೆ ರಾಜ್ಯ ಚುನಾವಣಾ ಆಯೋಗವು ಉಪಚುನಾವಣೆ ಘೋಷಣೆ ಮಾಡಿದ್ದು, ವೇಳಾಪಟ್ಟಿ ಪ್ರಕಟಿಸಿದೆ. ರಾಜ್ಯದ ೧೯೫ ತಾಲೂಕಿನ ೫೩೧ ಗ್ರಾಮಪಂಚಾಯಿತಿಗಳ ಒಟ್ಟು ೭೪೧ ಸ್ಥಾನಗಳಿಗೆ ಚುನಾವಣೆ ಪ್ರಕಟಿಸಲಾಗಿದೆ. ನವೆಂಬರ್ ೭ರಂದು ಚುನಾವಣೆಗೆ ಅಧಿಸೂಚನೆ ಪ್ರಕಟವಾಗಲಿದ್ದು, ೧೨ರಂದು ನಾಮಪತ್ರ ಸಲ್ಲಿಕೆ ಮಾಡಲು ಕೊನೆಯ ದಿನವಾಗಿದೆ. ೧೩ರಂದು ನಾಮಪತ್ರಗಳ ಪರಿಶೀಲನೆ ಕಾರ್ಯ ನಡೆಯಲಿದೆ. ೧೫ರಂದು ನಾಮಪತ್ರಗಳ ವಾಪಸ್ ಪಡೆಯಲು ಕಡೆಯ ದಿನವಾಗಿದೆ. ೨೩ರಂದು ಚುನಾವಣೆ ನಡೆಯಲಿದ್ದು, ಮರು ಮತದಾನ ಅವಶ್ಯವಿದ್ದರೆ ೨೫ ರಂದು ಜರುಗಲಿದೆ. ೨೭ರಂದು ಮತ ಎಣಿಕೆ ನಡೆಯಲಿದೆ. ಚುನಾವಣೆ ನಡೆಯುವ ಗ್ರಾಮಪಂಚಾಯಿತಿ ವ್ಯಾಪ್ತಿಯಲ್ಲಿ ನವೆಂಬರ್ ೭ ರಿಂದ ೨೭ ರವರೆಗೆ ಚುನಾವಣಾ ನೀತಿ ಸಂಹಿತೆಯು ಜಾರಿಯಲ್ಲಿರುತ್ತದೆ ಎಂದು ಚುನಾವಣಾ ಆಯೋಗವು ಪ್ರಕಟಣೆಯಲ್ಲಿ ತಿಳಿಸಿದೆ.

<><*<><>*><>

ಕೊಡಗು ಜಿಲ್ಲೆಯಲ್ಲಿ ಈ ಬಾರಿ ಹೆಚ್ಚಿನ ಮಳೆಯಾಗಿದ್ದು, ಹಾರಂಗಿ ಜಲಾಶಯ ಭರ್ತಿಯಾಗಿರುವ ಹಿನ್ನೆಲೆಯಲ್ಲಿ ಶಾಸಕ ಡಾ.ಮಂತರ್‌ಗೌಡ, ಅರಕಲಗೂಡು ವಿಧಾನಸಭಾ ಕ್ಷೇತ್ರದ ಶಾಸಕ ಎ.ಮಂಜು ಸೇರಿದಂತೆ ಹಲವು ಗಣ್ಯರು ಹಾರಂಗಿಯ ಕಾವೇರಿ ಪ್ರತಿಮೆಗೆ ವಿಶೇಷ ಪ್ರಾರ್ಥನೆ ಸಲ್ಲಿಸಿದರು. ಹಾರಂಗಿ ಎಡದಂಡೆ ಮುಖ್ಯ ನಾಲೆ ಸಂಪರ್ಕಿಸುವ ೭.೮೬ ಕಿಲೋ ಮೀಟರ್‌ನಿಂದ ೧೪.೬೫ ಕಿಲೋ ಮೀಟರ್‌ವರೆಗೆ ಕಾಂಕ್ರೀಟಿಕರಣ ಮಾಡಲು ಸರ್ಕಾರದಿಂದ ೬೨ ಕೋಟಿ ರೂಪಾಯಿ ಬಿಡುಗಡೆಯಾಗಿದೆ. ಜನವರಿಯಲ್ಲಿ ಕಾಮಗಾರಿಗೆ ಚಾಲನೆ ದೊರಕಲಿದೆ ಎಂದು ಶಾಸಕ ಡಾ. ಮಂಥರ್ ಗೌಡ ತಿಳಿಸಿದರು, ಹಾರಂಗಿ ಅಚ್ಚುಕಟ್ಟು ಪ್ರದೇಶ ಸಂರಕ್ಷಣೆ ಮಾಡುವ ನಿಟ್ಟಿನಲ್ಲಿ ಎಲ್ಲರೂ ಮುಂದಾಗಬೇಕು. ಪ್ಲಾಸ್ಟಿಕ್ ಬಳಕೆ ನಿಷೇಧಿಸುವಂತೆ ಸೂಚಿಸಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೬.೩೫ ಕ್ಕೆ <>*><>**